CC. 138/15
PW-4

Govt. of Karnataka **ಅನುಬಂಧ-ಎ** [C.R.P. 67

Deposition Sheets
(R.P. No. 57)
Form No. 4
(Criminal)

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ, ನ್ಯಾಯಾಲಯ ಸಿರಾ

**ಸಿ.ಸಿ. ಸಂಖ್ಯೆ 138/15**

ದಿನಾಂಕಃ **16-06-2023** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| ಚಾಸಾ -8 | ಫ್ರಾಸಾ. -4 |
|---|---|
| ಹೆಸರು | ರಾಮಲಿಂಗಯ್ಯ |
| ತಂದೆಯ/ಗಂಡನ ಹೆಸರು | ಬಿನ್ ಲಚ್ಚಾನಾಯಕ |
| ವಯಸ್ಸು | 63 ವರ್ಷ |
| ಉದ್ಯೋಗ | ನಿವೃತ್ತ ಎ ಎಸ್ ಐ |
| ವಾಸ | ತುಮಕೂರು |

**ಮುಖ್ಯ ವಿಚಾರಣೆಃ- ಮಾನ್ಯ ಸ.ಸ.ಅ. ರವರಿಂದಃ-**

ನಾನು 2014 ರಿಂದ 2019 ರವರೆಗೆ ಕಳ್ಳಂಬೆಳ್ಳ ಪೊಲೀಸ್ ಠಾಣೆಯಲ್ಲಿ ಎ ಎಸ್ ಐ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 29-11-2014 ರಂದು ಈ ಪ್ರಕರಣದ ಕಡತವನ್ನು ಚಾಸಾ.7 ರವರಿಂದ ಪಡೆದು ಕಡತವನ್ನು ಪರಿಶೀಲಿಸಿ ತನಿಖೆಯನ್ನು ಮುಂದುವರಿಸಿರುತ್ತೇನೆ. ತಾಃ 30-11-2014 ರಂದು ಮಾದರಿ ಮದ್ಯದ ಬಾಟಲುಗಳನ್ನು ರಾಸಾಯನಿಕ ಪರೀಕ್ಷೆಗಾಗಿ ನಮ್ಮ ಸಿಬ್ಬಂದಿಯ ಮೂಲಕ ಕಳುಹಿಸಿರುತ್ತೇನೆ. ತಾಃ 4-2-2015 ರಂದು FSL ವರದಿಯನ್ನು ಪಡೆದುಕೊಂಡಿರುತ್ತೇನೆ. FSL ವರದಿಯನ್ನು ನಿ.ಪಿ.7 ಎಂದು ಸಾಕ್ಷಿಯ ಸಹಿಯನ್ನು ನಿ.ಪಿ.7 ಎ ಎಂದು ಗುರುತಿಸಲಾಯಿತು. 2 ನೇ

ಆರೋಪಿ ಮೃತಪಟ್ಟಿದ್ದು , ನನ್ನ ತನಿಖೆ ಪೂರ್ಣಗೊಂಡಿದ್ದರಿಂದ , 1 ನೇ ಆರೋಪಿಯ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ.

ನಾನು FSL ಗೆ ಕಳುಹಿಸಿದ ಮಾದರಿ ವಸ್ತುಗಳನ್ನು ನೋಡಿದಲ್ಲಿ ಗುರುತಿಸುತ್ತೇನೆ. ಸಾಕ್ಷಿಯು ಮು.ಮಾ.1 ರಿಂದ 4 ನ್ನು ನೋಡಿ ಗುರುತಿಸಿರುತ್ತಾರೆ. ಸಾಕ್ಷಿಯು ನ್ಯಾಯಾಲಯದ ಮುಂದಿರುವ 1 ನೇ ಆರೋಪಿಯನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ–** ಆರೋಪಿ ಪರ Sri HBV ವಕೀಲರಿಂದಃ–

ನಾನು ಈ ಪ್ರಕರಣಕ್ಕೆ ಸಂಬಂಧಪಟ್ಟ ಯಾವುದೇ ಮದ್ಯವನ್ನು ರಾಸಾಯನಿಕ ಪರೀಕ್ಷೆಗೆ ಕಳುಹಿಸಿರುವುದಿಲ್ಲ ಎಂದರೆ ಸರಿಯಲ್ಲ. ನಿ.ಪಿ.7 ರ FSL ವರದಿಗೂ ಈ ಪ್ರಕರಣಕ್ಕೂ ಯಾವುದೇ ಸಂಬಂಧ ಇರುವುದಿಲ್ಲ ಎಂದರೆ ಸರಿಯಲ್ಲ. ನನ್ನ ತನಿಖೆಯಲ್ಲಿ ಆರೋಪಿಯ ವಿರುದ್ಧ ಯಾವುದೇ ಆರೋಪ ಸಾಬೀತಾಗದಿದ್ದರೂ ಸಹ ಅಂಕಿ ಅಂಶಕ್ಕೋಸ್ಕರ ಸುಳ್ಳು ದೋ.ಆ. ಪಟ್ಟಿಯನ್ನು ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ– ಇಲ್ಲಾ .

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರೀಕರಣಗೊಳಿಸಿ ಪ್ರಿಂಟ್ ತೆಗೆಯಲಾಯಿತು.)

ಓ. ಹೇ. ಕೇ. ಸರಿ ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ. ಶಿರಾ.